# ಕರ್ನಾಟಕ ಸರ್ಕಾರ

ಸಂಖ್ಯೆ : ಇಡಿ 549 ಪಿಜಿಸಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ : 02–11–2015

## ಸುತ್ತೋಲೆ

**ವಿಷಯ**: 2016–17ನೇ ಸಾಲಿಗೆ 1 ರಿಂದ 10ನೇ ತರಗತಿಯವರೆಗಿನ ಖಾಸಗಿ ಅನುದಾನರಹಿತ ಶಾಲೆಗಳನ್ನು ಹೊಸದಾಗಿ ನೋಂದಣಿ ಮಾಡಲು ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವ ಕುರಿತು.

**ಉಲ್ಲೇಖ** : 1) ಸರ್ಕಾರದ ಅಧಿಸೂಚನೆ ಸಂಖ್ಯೆ ; ಇಡಿ 369 ಪಿಜಿಸಿ 2014 ; ದಿನಾಂಕ :11.11.2014 ಮತ್ತು ತಿದ್ದುಪಡಿ ದಿನಾಂಕ ; 02.05.2015.

2) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 359 ಪಿಜಿಸಿ 2015;ದಿನಾಂಕ :05.09.2015.

3) ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ 359 ಪಿಜಿಸಿ 2015;ದಿನಾಂಕ :05.09.2015.

4) ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 549 ಪಿಜಿಸಿ 2015;ದಿನಾಂಕ :02.11.2015.

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1)ರಲ್ಲಿ 1ನೇ ತರಗತಿಯಿಂದ 10ನೇ ತರಗತಿ ಕನ್ನಡ ಮಾಧ್ಯಮ ಶಾಲೆಗಳು ಹಾಗೂ 6 ರಿಂದ 10ನೇ ತರಗತಿವರೆಗೆ ಆಂಗ್ಲ ಮಾಧ್ಯಮ ಶಾಲೆಗಳಿಗೆ ಸಂಬಂಧಪಟ್ಟಂತೆ ಪರಿಷ್ಕೃತ ನೋಂದಣಿ ಶುಲ್ಕ, ಸಂಸ್ಕರಣ ಶುಲ್ಕ ಹಾಗೂ ಮೂಲಭೂತ ಸೌಕರ್ಯಗಳನ್ನು ನಿಗಧಿಪಡಿಸಲಾಗಿದೆ.

ಉಲ್ಲೇಖ (2)ರ ಅಧಿಸೂಚನೆಯಲ್ಲಿ ಹೊಸದಾಗಿ 1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ ಖಾಸಗಿ ಪ್ರಾಥಮಿಕ ಶಾಲೆ ಮತ್ತು 1 ರಿಂದ 10ನೇ ತರಗತಿಯವರೆಗೆ ಉರ್ದು/ಮರಾಠಿ/ಇತರೆ ಮಾಧ್ಯಮಗಳ ಖಾಸಗಿ ಪ್ರಾಥಮಿಕ ಮತ್ತು ಪ್ರೌಢ ಶಾಲೆ ತೆರೆಯುವ ಸಂಬಂಧ ಕ್ರಮವಹಿಸಲು ಸೂಚಿಸಿದೆ.

ಉಲ್ಲೇಖ (3)ರಲ್ಲಿ ಆಂಗ್ಲ ಮಾಧ್ಯಮದಲ್ಲಿ ಶಿಕ್ಷಣ ನೀಡಲು 1 ರಿಂದ 5ನೇ ತರಗತಿ ಹೊಸ ಶಾಲೆಯ ನೋಂದಣಿಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಸೆಕ್ಷನ್ 30 ಹಾಗೂ 31 ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ : ಇಡಿ 359 ಪಿಜಿಸಿ 2015; ದಿನಾಂಕ :05–09–2015 ಅನ್ವಯಿಸುತ್ತವೆ ಎಂದು ತಿಳಿಸಲಾಗಿದೆ.

ಉಲ್ಲೇಖ (4)ರಲ್ಲಿನ ಅಧಿಸೂಚನೆಯಲ್ಲಿ ಆಂಗ್ಲ ಮಾಧ್ಯಮದ 1 ರಿಂದ 5ನೇ ತರಗತಿಯವರೆಗೆ ನೋಂದಣಿ ಪ್ರಾಧಿಕಾರಿಗಳನ್ನು ಗೊತ್ತುಪಡಿಸಲಾಗಿದೆ.

2016–17ನೇ ಸಾಲಿಗೆ ಮಾತ್ರ ಅನ್ವಯವಾಗುವಂತೆ 1 ರಿಂದ 10ನೇ ತರಗತಿಯವರೆಗಿನ ಎಲ್ಲಾ ಮಾಧ್ಯಮದ ಖಾಸಗಿ ಅನುದಾನರಹಿತ ಶಾಲೆಗಳನ್ನು ಪ್ರಾರಂಭಿಸಲು Online ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು 31ನೇ ಅಕ್ಟೋಬರ್ 2015ರ ಬದಲಾಗಿ 20ನೇ ನವೆಂಬರ್ 2015ರವರೆಗೆ ವಿಸ್ತರಿಸಿದೆ.

2/11/15

(ಹೆಚ್.ಎಸ್.ಹೊನ್ನೇಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ಪ್ರಾಥಮಿಕ)

3/11/15

**ಇವರಿಗೆ:**

1) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು.
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಬುರಗಿ.